# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:UG::2024-25/3594 ದಿನಾಂಕ:06.12.2024

## :ಅಧಿಸೂಚನೆ:

ವಿಷಯ:- ತುಮಕೂರು ವಿಶ್ವವಿದ್ಯಾನಿಲಯದಡಿಯಲ್ಲಿ 2024-25 ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪಠ್ಯಕ್ರಮದಲ್ಲಿ ಪರಿಸರ ವಿಜ್ಞಾನ ವಿಷಯದ ಪತ್ರಿಕೆಯನ್ನು ಪರಿಚಯಿಸಿ ಅಧಿಸೂಚಿಸಿರುವ ಕುರಿತು.

ಉಲ್ಲೇಖ:- 1) ವಿವಿ ಪರಿಷ್ಕೃತ ಅಧಿಸೂಚನೆ ಪತ್ರದ ಸಂಖ್ಯೆ: ತು.ವಿ:ಶೈ.ವಿ:04:DSN:2024-25/2766 ದಿನಾಂಕ:08.11.2024.

2) ಸರ್ಕಾರದ ಪತ್ರದ ಸಂಖ್ಯೆ:ಇಡಿ:387 ಯುಬಿಎ 2024 ದಿನಾಂಕ:14.11.2024.

3) ಅಧ್ಯಕ್ಷರು ಸ್ನಾತಕ ಪರಿಸರ ಅಧ್ಯಯನ ಮಂಡಳಿ ಇವರ ಸಭಾ ನಡಾವಳಿಗಳ ದಿನಾಂಕ:21.11.2024.

4) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:05.12.2024

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಘಟಕ ಕಾಲೇಜುಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ 2024-25ನೇ ಶೈಕ್ಷಣಿಕ ಸಾಲಿನಿಂದ ವಿವಿಧ ಸ್ನಾತಕ ಪದವಿ ಕಾರ್ಯಕ್ರಮಗಳ ಅವಧಿ ಮತ್ತು ಪಠ್ಯಕ್ರಮಗಳನ್ನು ಪರಿಷ್ಕರಿಸಿ ಅನುಷ್ಠಾನಗೊಳಿಸಲು ಉಲ್ಲೇಖ (01)ರಲ್ಲಿ ವಿಶ್ವವಿದ್ಯಾನಿಲಯದಿಂದ ಅಧಿಸೂಚಿಸಲಾಗಿತ್ತು. ಉಲ್ಲೇಖ (02)ರ ಪತ್ರವನ್ನು ಓದಲಾಗಿ ಉಲ್ಲೇಖ (03)ರಲ್ಲಿ ಅಧ್ಯಯನ ಮಂಡಳಿಯವರು ಸಲ್ಲಿಸಿರುವ ಪಠ್ಯಕ್ರಮವನ್ನು ವಿಶ್ವವಿದ್ಯಾನಿಲಯದ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯನ್ನು ಕಾಯ್ದಿರಿಸಿ 2024-25ನೇ ಸಾಲಿನ ವಿವಿಧ ಸ್ನಾತಕ ಪದವಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಪರಿಸರ ವಿಜ್ಞಾನ ವಿಷಯದ ಪತ್ರಿಕೆಯನ್ನು ಕಡ್ಡಾಯ ಪತ್ರಿಕೆಯಾಗಿ (Compulsory Paper) ವಿಶ್ವವಿದ್ಯಾನಿಲಯವು ಅಳವಡಿಸಿಕೊಂಡು ಉಲ್ಲೇಖ (04) ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಅಧಿಸೂಚಿಸಲಾಗಿದೆ.

ಆದೇಶದ ಮೇರೆಗೆ,

07/12/2024

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಮತ್ತು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿಗಳು:

1. ಮಾನ್ಯ ಕುಲಸಚಿವರು (ಮೌ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ನಿರ್ದೇಶಕರು ಕಾಲೇಜು ಅಭಿವೃದ್ಧಿ ಪರಿಷತ್ತು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ಸಂಬಂಧಪಟ್ಟ ಕಾಲೇಜುಗಳಿಗೆ ಅಧಿಸೂಚನೆಯನ್ನು ಇ-ಮೇಲ್ ಮುಖಾಂತರ ಕಳುಹಿಸುವುದು ಹಾಗೂ ಜಾಲತಾಣದಲ್ಲಿ ಪ್ರಕಟಿಸುವುದು.
7. ಕಛೇರಿ ಪ್ರತಿ.